ಸಾಕ್ಷಿಯು ತಮ್ಮ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿ ವಿಚಾರಣೆ ಒಳಪಟ್ಟಿದ್ದು, ಅವರನ್ನು ಡಿಡಬ್ಲೂ-4 ಎಂದು ಪರಿಗಣಿಸಿ ಇಂದು ದಿನಾಂಕಃ 28.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ** ಪ್ರತಿವಾದಿಯ ಪರ ಶ್ರೀ ಎನ್ ವಿ ಪಿ ವಕೀಲರಿಂದಃ

ನಾನು ನನ್ನ ಮುಔಖಿಕ ವಿಚಾರಣೆಯ ಬದಲಾಗಿ ನನ್ನ ಮುಖ್ಯ ವಿಚಾರಣಾ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ನಿಜವಿರುತ್ತವೆ ಮತ್ತು ಅವುಗಳನ್ನು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿಗಳು ನನ್ನದೇ ಇರುತ್ತವೆ.

**ಪಾಟೀ ಸವಾಲುಃ** ವಾದಿಯ ಪರ ಶ್ರೀ ಜಿ ವಿ ಕೆ ವಕೀಲರಿಂದಃ

ನನ್ನ ಸಾಕ್ಷ್ಯ ಪ್ರಮಾಣ ಪತ್ರಕ್ಕೆ ಮಾಹಿತಿಯನ್ನು ಶಿವನಗೌಡ ರವರು ನೀಡಿರುತ್ತಾರೆ. ಸದರಿ ಶಿವನಗೌಡರ ರವರ ಆಸ್ತಿಯನ್ನು ನಾನು ಲಾವಣಿ ಹಾಕಿಕೊಂಡು ಸುಮಾರು 4 ವರ್ಷಗಳಿಂದ ವ್ಯವಸಾಯ ಮಾಡುತ್ತಿದ್ದೇನೆ ನನಗೆ ಯಾವುದೇ ಸ್ವಂತ ಜಮೀನುಗಳು ಇರುವುದಿಲ್ಲ. ವಾದಿಯ ಆಸ್ತಿಯಲ್ಲಿ ಕಾಲು ದಾರಿಯನ್ನು ಹೊರತುಪಡಿಸಿ ಬಂಡಿ ದಾರಿ ಇರುವುದಿಲ್ಲ ಎಂದರೆ ಸಾಕ್ಷಿಯು ನನಗೆ ತಿಳಿದಿರುವ ಹಾಗೆ ಬಂಡಿ ದಾರಿ ಇರುತ್ತದೆ ಎಂದು ನುಡಿದಿರುತ್ತಾರೆ. ಪ್ರತಿವಾದಿಯರಿಗೆ ಅನುಕೂಲವಾಗಲೀ ಎಂದು ನಾನು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಬಂಡಿ ದಾರಿ ಅಸ್ತಿತ್ವದಲ್ಲಿ ಇರುವ ಬಗ್ಗೆ ನಾನು ಯಾವುದೇ ದಾಖಲೆಗಳನ್ನು ನಾನು ನೋಡಿರುವುದಿಲ್ಲ..

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಪ್ರಧಾನ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.

ಸಾಕ್ಷಿಯು ತಮ್ಮ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿ ವಿಚಾರಣೆ ಒಳಪಟ್ಟಿದ್ದು, ಅವರನ್ನು ಡಿಡಬ್ಲೂ-3 ಎಂದು ಪರಿಗಣಿಸಿ ಇಂದು ದಿನಾಂಕಃ 28.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ** ಪ್ರತಿವಾದಿಯ ಪರ ಶ್ರೀ ಎನ್ ವಿ ಪಿ ವಕೀಲರಿಂದಃ

ನಾನು ನನ್ನ ಮುೌಖಿಕ ವಿಚಾರಣೆಯ ಬದಲಾಗಿ ನನ್ನ ಮುಖ್ಯ ವಿಚಾರಣಾ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ನಿಜವಿರುತ್ತವೆ ಮತ್ತು ಅವುಗಳನ್ನು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿಗಳು ನನ್ನದೇ ಇರುತ್ತವೆ.

**ಪಾಟೀ ಸವಾಲುಃ** ವಾದಿಯ ಪರ ಶ್ರೀ ಜಿ ವಿ ಕೆ ವಕೀಲರಿಂದಃ

ದಾವಾ ಆಸ್ತಿಯನ್ನು ನಾನು ನೋಡಿರುತ್ತೇನೆ. ನನ್ನ ಜಮೀನಿನ ಸರ್ವೆನಂ.343/1 ಆಗಿರುತ್ತದೆ. ವಿವಾಧಿತ ದಾರಿಗೂ ಮತ್ತು ನನ್ನ ಜಮೀನಿನ ನಡುವೆ 2 ಹೊಲಗಳು ಇರುತ್ತವೆ. ನಾನು ಮತ್ತು ಪ್ರತಿವಾದಿಯರು ಸ್ನೇಹಿತರು ಎಂದರೆ ಸರಿ. ನಾನು ಮತ್ತು ಪ್ರತಿವಾದಿ ಒಂದೇ ರಾಜಕೀಯ ಪಕ್ಷದವರು ಎಂದರೆ ಸರಿ. ಪ್ರತಿವಾದಿಯರು ರಾಜಕೀಯವಾಗಿ ಆರ್ಥಿಕವಾಗಿ ಸಾಮಾಜಿಕವಾಗಿ ಬಲಾಢ್ಯರು ಎಂದರೆ ಆ ಬಗ್ಗೆ ನನಗೆ ಗೊತ್ತಿರುವುದಿಲ್ಲ. ವಾದಿ ಮತ್ತು ಪ್ರತಿವಾದಿಯರ ನಡುವೆ ವಿವಾದಿತ ದಾರಿಯ ಸಲುವಾಗಿ ಗಲಾಟೆ ನಡೆದಿದ್ದು, ಸದರಿ ಗಲಾಟೆಯ ಕಾರಣದಿಂದ ಮೂಲ ವಾದಿ ಆತ್ಮಹತ್ಯ ಮಾಡಿಕೊಂಡಿರುತ್ತಾರೆ ಎಂದರೆ ಆ ಬಗ್ಗೆ ನನಗೆ ಗೊತ್ತಿರುವುದಿಲ್ಲ. ಆ ಬಗ್ಗೆ ಅಪರಾಧಿಕ ಪ್ರಕರಣ ದಾಖಲಾಗಿದ್ದು ಸದರಿ ಪ್ರಕರಣದಲ್ಲಿ ಪ್ರತಿವಾದಿ ನ್ಯಾಯಾಲಯಕ್ಕೆ ಓಡಾಡುತ್ತಿದ್ದಾರೆ ಎಂದರೆ ಆ ಬಗ್ಗೆ ನನಗೆ ಗೊತ್ತಿರುವುದಿಲ್ಲ.

2. ಕಂದಾಯ ದಾಖಲೆಗಳ ಬಗ್ಗೆ ನನಗೆ ಯಾವುದೇ ವಿಶೇಷವಾದ ಜ್ಞಾನ ಇರುವುದಿಲ್ಲ. ವಿವಾದಿತ ದಾರಿ 30X16 ಫೂಟ್ ಇರುವ ಬಗ್ಗೆ ನಾನು ಯಾವುದೇ ದಾಖಲೇಗಳನ್ನು ನೋಡಿರುವುದಿಲ್ಲ. ನಾನು ಹೇಳುವಂತೆ ಯಾವುದೇ ದಾರಿ ಅಸ್ತಿತ್ವದಲ್ಲಿ ಇಲ್ಲದಿದ್ದರೂ ನಾನು ಪ್ರತಿವಾದಿಯರಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ ನಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಿವಾದಿತ ದಾರಿ ಕೇವಲ 8 ಅಡಿ 3 ಇಂಚು ನಷ್ಟೇ ಇದಿದು ಅದು ಕೇವಲ ಕಾಲು ದಾರಿಯಾಗಿರುತ್ತದೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ಸದರಿ ದಾರಿ ಚಕ್ಕಡಿ ದಾರಿ ಆಗಿದ್ದು ಅದು 16 ಫೂಟ್ ಆಗಿರುತ್ತದೆ ಎಂದು ನುಡಿದಿರುತ್ತಾರೆ. 8 ಅಡಿ ಇದ್ದಂತಹ ದಾರಿಯನ್ನು ಹೇಗಾದರೂ ಮಾಡಿ ಅದನ್ನು ಅಗಲೀಕರಣ ಮಾಡಬೇಕು ಎಂದು ಹೇಳಿ ಪ್ರತಿವಾದಿಯರು ಜೆ ಸಿ ಬಿ

ಯನ್ನು ತೆಗೆದುಕೊಂಡು ಹೋಗಿ ರೆಸ್ತ ಅಗಲೀಕರಣ ಮಾಡುವಾಗ ವಾದಿ ಮತ್ತು ಪ್ರತಿವಾದಿಯರ



ನಡುವೆ ಗಲಾಟೆಯಾಗಿ ವಾದಿಯು ಮನನೊಂದು ಆತ್ಮಹತ್ಯೆ ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಹೇಳಿರುವ ಎಲ್ಲಾ ಅಂಶಗಳು ಸುಳ್ಳು ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಪ್ರಧಾನ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.